# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು-572 103

ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ : 0816-2270719


ಸಂಖ್ಯೆ:ತುವಿ:ಖ.ಕೋ:107:ARP:2024-25/ 3165 ದಿನಾಂಕ:24.09.2024

## ದರಪಟ್ಟಿ ಆಹ್ವಾನ

ವಿಷಯ: ತುಮಕೂರು ವಿಶ್ವವಿದ್ಯಾನಿಲಯದ 2023-24 ನೇ ಸಾಲಿನ ವಾರ್ಷಿಕ ವರದಿಯನ್ನು ಪುಸ್ತಕ ರೂಪದಲ್ಲಿ ಮುದ್ರಿಸಿ ಸರಬರಾಜು ಪಡೆಯಲು ದರಪಟ್ಟಿಗಳನ್ನು ಆಹ್ವಾನಿಸಿರುವ ಕುರಿತು.

ಉಲ್ಲೇಖ: 1. ಉಪಕುಲಸಚಿವರು, ಅಭಿವೃದಿ ವಿಭಾಗ, ತು.ವಿ.ತು ಇವರ ಟಿಪ್ಪಣಿ ದಿನಾಂಕ: 10.09.2024

2. ವಿ.ವಿ ಅಧಿಸೂಚನೆ ಪತ್ರದ ಸಂಖ್ಯೆ: ತುವಿತು:ಕೆ.ಟಿ.ಪಿ.ಪಿ/ತಿ.ಪ/ಖ.ಕೋ/2022-23/9035 ದಿನಾಂಕ: 09.09.2022.

3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 24.09.2024

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (01)ರ ಟಿಪ್ಪಣಿಯನುಸಾರ ತುಮಕೂರು ವಿಶ್ವವಿದ್ಯಾನಿಲಯದ 2023-24ನೇ ಸಾಲಿನ ವಾರ್ಷಿಕ ವರದಿಯನ್ನು ಕನ್ನಡ ಮತ್ತು ಆಂಗ್ಲ ಆವೃತ್ತಿಯಲ್ಲಿ ವರದಿಗಳನ್ನು ಮುದ್ರಿಸಿ ಸರಬರಾಜು ಪಡೆಯುವ ಸಂಬಂಧ ಉಲ್ಲೇಖ (02)ರ ವಿಶ್ವವಿದ್ಯಾನಿಲಯದ ಆದೇಶದಂತೆ ಕೆಳಕಂಡ ಕೋಷ್ಟಕದಲ್ಲಿ ತಿಳಿಸಿರುವಂತೆ ಷರತ್ತುಗಳಿಗೊಳಪಟ್ಟು ಆಸಕ್ತ ನೊಂದಾಯಿತ ಸಂಸ್ಥೆಗಳಿಂದ ಉಲ್ಲೇಖ (03)ರ ಅನುಮೋದನೆ ಮೇರೆಗೆ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

| ಕ್ರ. ಸಂ. | ವಾರ್ಷಿಕ ವರದಿಯ ವಿನ್ಯಾಸ ಮತ್ತು ಮುದ್ರಣ ವಿವರ | ಅಂದಾಜು ಪ್ರಮಾಣ | ಮುದ್ರಣದ ದರ ರೂ. (ಒಂದು ಪ್ರತಿಗೆ, ಎಲ್ಲಾ ತೆರಿಗೆಗಳು ಸೇರಿದಂತೆ) |
|---|---|---|---|
| 01 | <u>2023-24 ನೇ ಸಾಲಿನ ವಾರ್ಷಿಕ ವರದಿ (ಕನ್ನಡ ಆವೃತ್ತಿ)</u><br>Approximate Pages: 180-200<br>Dimension 8 ½ 11 size<br>Paper : Maplitho paper 80 gsm<br>Cover 4 pages 300 gsm,<br>Multicolor print, art card with outer matt Lamination<br>Binding: Perfect Binding | 100 | |
| 02 | <u>2023-24 ನೇ ಸಾಲಿನ ವಾರ್ಷಿಕ ವರದಿ (ಆಂಗ್ಲ ಆವೃತ್ತಿ)</u><br>Approximate Pages: 180-200<br>Dimension 8 ½ 11 size<br>Paper : Maplitho paper 80 gsm<br>Cover 4 pages 300 gsm,<br>Multicolor print, art card with outer matt Lamination<br>Binding: Perfect Binding | 100 | |
| 03 | Soft Copy CD with sticker (Kannada & English) | 375 | |

**<u>ಷರತ್ತು ಮತ್ತು ನಿಬಂದನೆಗಳು:</u>**

1. ಲಕೋಟೆಯ ಮೇಲೆ "ತುಮಕೂರು ವಿಶ್ವವಿದ್ಯಾನಿಲಯದ 2023-24 ನೇ ಸಾಲಿನ ವಾರ್ಷಿಕ ವರದಿಯನ್ನು ಪುಸ್ತಕ ರೂಪದಲ್ಲಿ ಮುದ್ರಿಸಿ ಸರಬರಾಜು ಮಾಡಲು ದರಪಟ್ಟಿ" ಎಂದು ಸ್ಪಷ್ಟವಾಗಿ ನಮೂದಿಸತಕ್ಕದ್ದು.
2. **NSIC/MSME** ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಲಗತ್ತಿಸತಕ್ಕದ್ದು.
3. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ:30.09.2024 ಅಪರಾಹ್ನ 3.30 ಗಂಟೆ.
4. ದರಪಟ್ಟಿಯು ರೂ. 2.00 ಲಕ್ಷದ (ಎರಡು ಲಕ್ಷ) ಮಿತಿಯೊಳಗೊಳಪಟ್ಟಿರುತ್ತದೆ.
5. ದರಪಟ್ಟಿಗಳನ್ನು ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್. ರಸ್ತೆ, ತುಮಕೂರು-572 103 ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಲ್ಲಿ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.

(ಪು.ತಿ.ನೋ)

6. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
7. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸತಕ್ಕದ್ದು.
8. ವಿಶ್ವವಿದ್ಯಾನಿಲಯವು ಸೂಚಿಸುವ ಸ್ಥಳಕ್ಕೆ ಮುದ್ರಣ ಮಾಡಿದ ಪುಸ್ತಕಗಳನ್ನು ಸರಬರಾಜು ಮಾಡುವುದು ಮತ್ತು ಸಾರಿಗೆ ವೆಚ್ಚವನ್ನು (ತಗಲುವ ಕಾರ್ಮಿಕರ ವೆಚ್ಚ) ಸರಬರಾಜುದಾರರೇ ಭರಿಸತಕ್ಕದ್ದು.
9. ದರಪಟ್ಟಿಯಲ್ಲಿ ನಮೂದಿಸುವ ದರಗಳು ತೆರಿಗೆ, ಸಾಗಾಣಿಕಾ ವೆಚ್ಚ ಮತ್ತು ಇತರೆ ಸೇವೆಯ ಮೊತ್ತವನ್ನು ಒಳಗೊಂಡಿರತಕ್ಕದ್ದು.
10. ದರಪಟ್ಟಿಯಲ್ಲಿ ನಮೂದಿಸಿರುವ ಮುದ್ರಣದ ಪ್ರಮಾಣವನ್ನು ಹೆಚ್ಚಿಸುವ ಅಥವಾ ಕಡಿಮೆಗೊಳಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿರುತ್ತದೆ.
11. ತುಮಕೂರು ವಿಶ್ವವಿದ್ಯಾನಿಲಯದ 2023-24ನೇ ಸಾಲಿನ ವಾರ್ಷಿಕ ವರದಿಯನ್ನು ಪುಸ್ತಕ ರೂಪದಲ್ಲಿ ಕನ್ನಡ ಮತ್ತು ಆಂಗ್ಲ ಆವೃತ್ತಿಗಳನ್ನು ಸರಬರಾಜು ಆದೇಶ ನೀಡಿದ ಒಂದು ವಾರದೊಳಗಾಗಿ ಮುದ್ರಿಸಿ ಸರಬರಾಜು ಮಾಡತಕ್ಕದ್ದು.
12. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
13. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
14. ಹೆಚ್ಚಿನ ವಿವರಗಳು ಅಥವಾ ಮಾಹಿತಿಯ ಅಗತ್ಯವಿದ್ದಲ್ಲಿ **ಉಪಕುಲಸಚಿವರು, ಅಭಿವೃದ್ಧಿ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರನ್ನು ಸಂಪರ್ಕಿಸಬಹುದು.

ಆದೇಶದ ಮೇರೆಗೆ

ಉಪಕುಲಸಚಿವರು

ಉಪಕುಲಸಚಿವರು
ಖರೀದಿ ಕೋಶ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರೊ. ಸುದರ್ಶನ ರೆಡ್ಡಿ, ಅಧ್ಯಕ್ಷರು, ವಾರ್ಷಿಕ ವರದಿ ಸಮಿತಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಉಪಕುಲಸಚಿವರು, ಅಭಿವೃದ್ಧಿ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ಮಾಹಿತಿಗಾಗಿ.
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು.)
5. ಕಛೇರಿ ಪ್ರತಿ.